# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ನಗರದ ಸ್ಥಳೀಯ ಯೋಜನಾ ಪ್ರದೇಶದ
ಮಹಾ ಯೋಜನೆಗೆ (ಪರಿಷ್ಕೃತ–I) ಸರ್ಕಾರದ ಅಂತಿಮ ಅನುಮೋದನೆ
ನೀಡುವ ಕುರಿತು.

ಓದಲಾಗಿದೆ:1) ಸರ್ಕಾರದ ಆದೇಶ ಸಂ:ನಅಇ 78 ಬೆಂರೂಪ್ರಾ 2006 ದಿ:12.07.2006

2) ಆಯುಕ್ತರು ನಗರಾಭಿವೃದ್ಧಿ ಪ್ರಾಧಿಕಾರ ಚಿತ್ರದುರ್ಗ ಇವರ
ಪತ್ರ ಸಂ:ಚಿನಪ್ರಾ/ನಯೋ/718/ಮಯೋ.ಪ–1:2008-09ದಿ:25.02.2009,

3) ನಿದೇಶಕರು, ನಗರ ಯೋಜನಾ ಇಲಾಖೆ ಇವರ ಏಕ ಕಡತ ಸಂ.ನಯೋ(13)/
ಜಂನಿ(ಬೆಂ.ವಿ)ಮಯೋ(ಪರಿಷ್ಕೃತ–I)ಅಂತಿಮ/563/2008–09ದಿ:1.04.2009

****

ಪ್ರಸ್ತಾವನೆ

ಮೇಲೆ ಕ್ರ.ಸಂ.(1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಚಿತ್ರದುರ್ಗ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪರಿಷ್ಕೃತ–I)ಕ್ಕೆ ಸರ್ಕಾರದ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ.

ಮೇಲೆ ಕ್ರ.ಸಂ.(2)ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು ನಗರಾಭಿವೃದ್ಧಿ ಪ್ರಾಧಿಕಾರ ಚಿತ್ರದುರ್ಗ ಇವರು ಚಿತ್ರದುರ್ಗ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪರಿಷ್ಕೃತ–I)ರ ನಕ್ಷೆ ಹಾಗೂ ವರದಿಯನ್ನು ತಯಾರಿಸಿ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಿ, ಶಿಫಾರಸ್ಸಿನೊಂದಿಗೆ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಕ್ರ.ಸಂ.(3)ರಲ್ಲಿ ಓದಲಾದ ನಗರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತದಲ್ಲಿ ಚಿತ್ರದುರ್ಗ ನಗರದ ಜನಸಂಖ್ಯೆಯು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆ (ಪರಿಷ್ಕೃತ–1) ಯನ್ನು ತಯಾರಿಸಲಾಗಿದೆ. ಚಿತ್ರದುರ್ಗ ನಗರದ ಸ್ಥಳೀಯ ಯೋಜನಾ ಪ್ರದೇಶದ 13123.40 ಹೆಕ್ಟೇರ್ ವಿಸ್ತೀರ್ಣದಲ್ಲಿ 2964.268 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾ ಯೋಜನೆ (ಪರಿಷ್ಕೃತ–1)ಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 12ರಲ್ಲಿನ ಅಂಶಗಳನ್ನು ಪರಿಗಣಿಸಿ, ಚಿತ್ರದುರ್ಗ ನಗರದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ ಪ್ರದೇಶದಲ್ಲಿ ವಸತಿಗಾಗಿ 1163.037 ಹೆಕ್ಟೇರ್(ಶೆ.43.35), ವಾಣಿಜ್ಯಕ್ಕಾಗಿ 119.719 ಹೆಕ್ಟೇರ್ (ಶೆ.4.46), ಕೈಗಾರಿಕೆಗಾಗಿ 318.907 ಹೆಕ್ಟೇರ್ (ಶೇ11.89) ಸಾರ್ವಜನಿಕ /ಅರೆ ಸಾರ್ವಜನಿಕ ಉಪಯೋಗಕ್ಕಾಗಿ 226.311 ಹೆಕ್ಟೇರ್ (ಶೇ.8.43),ಉದ್ಯಾನವನ/ ಬಯಲು ಜಾಗಗಳಿಗೆ .101312ಹೆಕ್ಟೇರ್(ಶೇ11.63) ಹಾಗೂ ಸಾರಿಗೆ ಸಂಪರ್ಕ ವಲಯಕ್ಕಾಗಿ 437.799 ಹೆಕ್ಟೇರ್ (ಶೇ.17.66) ನಾಗರೀಕ ಸೌಲಭ್ಯಕ್ಕಾಗಿ 37.034 ಹೆಕ್ಟೇರ್ (ಶೇ.1.38) ಮತ್ತು ಜಲಾವೃತ್ತ ಪ್ರದೇಶವಾಗಿ 32.260 ಹೆಕ್ಟೇರ್ (ಶೇ 1.20) 213.00 ಹೆಕ್ಟೇರ್ ಸಂರಕ್ಷಿತ ಪ್ರದೇಶವೆಂದು, ಹಾಗೂ 68.10 ಹೆಕ್ಟೇರ್ ವಿಸ್ತೀರ್ಣದ ಹಾಲಿ ಚೋಳಗುಡ್ಡದ ಪ್ರದೇಶ ಒಳಗೊಂಡಂತೆ ನಿಗದಿಪಡಿಸಲಾಗಿದೆ. ಮಹಾ ಯೋಜನೆ (ಪರಿಷ್ಕೃತ–1)ಯನ್ನು ಅನುಷ್ಠಾನಗೊಳಿಸಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆ ನೀಡುವಂತೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

Scanned by CamScanner

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂ;ನಅಇ 105 ಬೆಂರೂಪ್ರಾ 09 ಬೆಂಗಳೂರು ದಿ:19.06.2009**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಚಿತ್ರದುರ್ಗ ಜಿಲ್ಲೆ-ಚಿತ್ರದುರ್ಗ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪರಿಷ್ಕೃತ-1)ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿ.ಟಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಪ್ರಕಟಣೆಗಾಗಿ ಹಾಗೂ ಪ್ರಕಟಿಸಿದ 100 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಕಳುಹಿಸಲು ಕೋರಿದೆ.

ಪ್ರತಿ:

1) ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
2) ಆಯುಕ್ತರು ನಗರಾಭಿವೃದ್ಧಿ ಪ್ರಾಧಿಕಾರ,ಚಿತ್ರದುರ್ಗ ಜಿಲ್ಲೆ,
3) ನಗರ ಯೋಜನಾ ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ ಚಿತ್ರದುರ್ಗ
4) ಕರ್ನಾಟಕ ರಾಜ್ಯಪತ್ರ.
5) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned by CamScanner